**RPAD**

## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಎಂ.ಕೆ.ಸೀತಾರಾಮ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯಂಟಗಾನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ಬಗ್ಗೆ – ಅಂತಿಮ ಆದೇಶ ಹೊರಡಿಸುವ ಬಗ್ಗೆ– ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/474/ಗ್ರಾಪಂಕಾ/2016, ದಿನಾಂಕ:27–08–2016.
2. ಅಪರ ನಿಬಂಧಕರು, ವಿಚಾರಣೆಗಳು–8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE/364/2016/ARE–8, ದಿನಾಂಕ: 20–11–2017.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/364/2016/ARE–8, ದಿನಾಂಕ: 20–11–2017.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: Uplok-2/DE/364/2016/ARE–8, ದಿನಾಂಕ: 22–11–2017.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಎಂ.ಕೆ.ಸೀತಾರಾಮ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯಂಟಗಾನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮಗಳು, ನಿಯಮ 214(2)(ಬಿ)(1) ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರ ಅನುಸಾರ ಸದರಿ ನಿಯಮ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರವರಿಗೆ ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/474/ಗ್ರಾಪಂಕಾ/2016, ದಿನಾಂಕ:27–08–2016 ರಲ್ಲಿ ವಹಿಸಲಾಯಿತು. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು–8, ಕರ್ನಾಟಕ ಲೋಕಾಯುಕ್ತ ಇವರು ಸಧರ್ರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

**"ದೋಷಾರೋಪಣೆ"**

"The charge of misconduct alleged against the DGO was that, while he was working as Panchayath Development Officer in Yantaganahalli Gram Panchayath, Nelamangala Taluk, Bangalore Rural District, contrary to Government circular dated 26.05.2005 DGO had enterd the khata in respect of the sites sold by a developer without complying with conditions of the said circular and thereby, the DGO failed to maintain absolute integrity and devotion to duty and renderd himself as unbecoming of a Government Servant. Thus he is a gulity of misconduct in terms of under Rule 3(1)(i) to (iii) of Karnataka Civil Services (Conduct) Rules, 1966".

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀ ಎಂ.ಕೆ.ಸೀತಾರಾಮ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯಂಟಗಾನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪ್ರಕರಣದಲ್ಲಿ ಇವರ ವಿರುದ್ಧದ ಆರೋಪಗಳು ಸಾಬೀತಾಗದಿರದ ಕಾರಣ ಅವರ ವಿರುದ್ಧದ ಆರೋಪಗಳಿಂದ ದೋಷಮುಕ್ತರನ್ನಾಗಿ ಮಾಡಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲು ತಿಳಿಸಿರುವುದಾಗಿ ಅಪರ ನಿಬಂಧಕರು, ವಿಚಾರಣೆಗಳು-8 ರವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ಪತ್ರದಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-8 ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ಎಂ.ಕೆ.ಸೀತಾರಾಮ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯಂಟಗಾನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪ್ರಕರಣದಲ್ಲಿ ಇವರ ವಿರುದ್ಧದ ಆರೋಪಗಳು ಸಾಬೀತಾಗದಿರದ ಕಾರಣ ವಿಚಾರಣಾ ಪ್ರಕ್ರಿಯೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿ ಆದೇಶ ಹೊರಡಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 858 ಗ್ರಾಪಂಕಾ 2017, ಬೆಂಗಳೂರು, ದಿನಾಂಕ:16-03-2018.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಶ್ರೀ ಎಂ.ಕೆ.ಸೀತಾರಾಮ್, ನಿವೃತ್ತ ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಯಂಟಗಾನಹಳ್ಳಿ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧದ ಆರೋಪಗಳು ಸಾಬೀತಾಗದಿರದ ಕಾರಣ ಸದರಿ ನೌಕರರ ವಿರುದ್ಧದ ವಿಚಾರಣೆಯಲ್ಲಿ ಮುಂದಿನ ಕ್ರಮವನ್ನು ಕೈಬಿಟ್ಟು ದೋಷಮುಕ್ತರನ್ನಾಗಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

16/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ</u>,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಅಪರ ನಿಬಂಧಕರು, ವಿಚಾರಣೆಗಳು-8, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಬೆಂಗಳೂರು ಗ್ರಾಮಾಂತರ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
6) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ನೆಲಮಂಗಲ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7) ಗಣಕ ಕೋಶ.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.